# ಕರ್ನಾಟಕ ವಿಧಾನ ಪರಿಷತ್ತು

Std 1-3-2021

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 30(173) |
| ಸದಸ್ಯರ ಹೆಸರು | ಶ್ರೀ ಕವಟಗಿ ಮಠ ಮಹಾಂತೇಶ ಮಲ್ಲಿಕಾರ್ಜುನ [ಸ್ಥಳೀಯ ಸಂಸ್ಥೆಗಳ ಕ್ಷೇತ್ರ] |
| ಉತ್ತರಿಸಬೇಕಾದ ದಿನಾಂಕ | 15-03-2021 (1-03-2021) |
| ಉತ್ತರಿಸಬೇಕಾದ ಸಚಿವರು | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಪ್ರಶ್ನೆ | ಉತ್ತರ |
|---|---|
| ಅ) ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಹೊಸ ಶಿಕ್ಷಣ ನೀತಿಯನ್ನು ಜಾರಿಗೆ ತರುವಲ್ಲಿ ಸರ್ಕಾರದ ನಿಲುವೇನು; | ಉನ್ನತ ಶಿಕ್ಷಣ ಹಾಗೂ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಕ್ಷೇತ್ರದಲ್ಲಿ ಸುಧಾರಣೆಯನ್ನು ಜಾರಿಗೆ ತರುವ ನಿಟ್ಟಿನಲ್ಲಿ ಸಕ್ರಿಯವಾಗಿ ಆದ್ಯತೆಗಳನ್ನು ಹಾಗೂ ವಾಸ್ತವತೆಗಳನ್ನು ಪರಿಗಣಿಸಿ ಕರ್ನಾಟಕ ಸರ್ಕಾರವು ರಾಷ್ಟ್ರೀಯ ಶಿಕ್ಷಣ ನೀತಿ-2020ನ್ನು ಜಾರಿಗೆ ತರುವ ನಿಲುವನ್ನು ಹೊಂದಿರುತ್ತದೆ. |
| ಆ) ರಾಜ್ಯದಲ್ಲಿ ಈ ಹೊಸ ಶಿಕ್ಷಣ ನೀತಿಯನ್ನು ಅನುಷ್ಠಾನಗೊಳಿಸಲು ತೆಗೆದುಕೊಳ್ಳಲಾಗಿರುವ ಕ್ರಮಗಳೇನು; [ಸಂಪೂರ್ಣ ವಿವರ ಒದಗಿಸುವುದು] | • ಶಿಕ್ಷಣ ಮಂತ್ರಾಲಯ , ಭಾರತ ಸರ್ಕಾರ, ಇವರಿಂದ ನೀಡಿರುವ ರಾಷ್ಟ್ರೀಯ ಶಿಕ್ಷಣ ನೀತಿ 2020ರ ಕಾಲಸೂಚಿಯಂತೆ ಅನುಷ್ಠಾನ ಕ್ರಮಗಳನ್ನು ಕೈಗೊಳ್ಳಲು ರಾಜ್ಯ ಸರ್ಕಾರ ಹಾಗೂ ಇಲಾಖೆಯು ಕಾರ್ಯ ಪ್ರವೃತ್ತವಾಗಿದೆ.<br>• ಸರ್ಕಾರದ ಹಂತದಲ್ಲಿ ಶ್ರೀ ಎಸ್.ವಿ.ರಂಗನಾಥ್ ಭಾ.ಆ.ಸೇ, ನಿವೃತ್ತ ಸರ್ಕಾರದ ಮುಖ್ಯ ಕಾರ್ಯದರ್ಶಿ ಇವರ ನೇತೃತ್ವದಲ್ಲಿ ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ 2020ರ ಸಮರ್ಪಕ ಅನುಷ್ಠಾನಕ್ಕಾಗಿ ಒಂದು ಕಾರ್ಯಪಡೆಯನ್ನು ರಚಿಸಲಾಗಿದೆ. ಸದರಿ ಕಾರ್ಯಪಡೆಯು ಕರ್ನಾಟಕದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ 2020ನ್ನು ಅನುಷ್ಠಾನಗೊಳಿಸುವ ಕುರಿತು ಒಂದು ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ವರದಿಯ ಶಿಫಾರಸ್ಸುಗಳಂತೆ ಸರ್ಕಾರವು ಹಾಗೂ ಇಲಾಖೆಯು ಕಾರ್ಯಪ್ರವೃತ್ತವಾಗಿದೆ.<br>• ಶಿಕ್ಷಣ ನೀತಿಯ ಅನುಷ್ಠಾನ ಚೌಕಟ್ಟಿನ ರೂಪುರೇಷೆಯನ್ನು ವಿನ್ಯಾಸಗೊಳಿಸಲು ಕೋರ್ ಸಮಿತಿಯನ್ನು ರಚಿಸಲಾಗಿದೆ. ಅದರಂತೆ ಕೋರ್ ಸಮಿತಿಯು ರಾಷ್ಟ್ರೀಯ ಶಿಕ್ಷಣ ನೀತಿ 2020ರ ಸಮಗ್ರ ದೃಷ್ಟಿಕೋನವನ್ನು ಅರ್ಥಮಾಡಿಕೊಳ್ಳಲು ಮತ್ತು ರಾಜ್ಯದಲ್ಲಿ ಈ ನೀತಿಯ ಯಶಸ್ವಿ ಅನುಷ್ಠಾನಕ್ಕೆ ಪರಿಣಾಮಕಾರಿಯಾದ ವಿಧಾನಗಳನ್ನು |

| | |
|---|---|
| | ಅನ್ವೇಷಿಸಲು ಸಮಗ್ರವಾದ ಸಂವಾದಗಳನ್ನು ಕೈಗೊಂಡಿತು.<br>• ಈ ಸಂವಾದದ ಪರಿಣಾಮವಾಗಿ ಕೋರ್ ಸಮಿತಿಯು ರಾಷ್ಟ್ರೀಯ ಶಿಕ್ಷಣ ನೀತಿ 2020ರಲ್ಲಿನ ವಿವಿಧ ಅಧ್ಯಾಯಗಳ ಆಧಾರದ ಮೇಲೆ ಉಪ ಸಮಿತಿಗಳನ್ನು ರಚಿಸಿ ವಿವರವಾದ ಚರ್ಚೆಗಳನ್ನು ನಡೆಸಿ ಕರ್ನಾಟಕದ ಪ್ರಸ್ತುತ ಶಾಲಾ ಶಿಕ್ಷಣದ ಶೈಕ್ಷಣಿಕ ಪರಿಸ್ಥಿತಿಯನ್ನು ಪರಿಶೀಲಿಸಿ ಮತ್ತು ಗಮನಹರಿಸಬೇಕಾದ ಪ್ರಮುಖ ಕ್ಷೇತ್ರಗಳನ್ನು ಗುರುತಿಸಿ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸೂಕ್ತ ಸಮಯ ಸೂಚಿಯೊಂದಿಗೆ ಕೈಗೊಳ್ಳಬೇಕಾದ ಪ್ರಮುಖ ಕ್ರಮಗಳನ್ನು ಸರ್ಕಾರಕ್ಕೆ ಸಲ್ಲಿಸಿರುತ್ತದೆ.<br>• 2020ರ ಸೆಪ್ಟೆಂಬರ್ 1 ರಿಂದ 25ರವರೆಗೆ ಶಿಕ್ಷಣ ಕ್ಷೇತ್ರದ ಎಲ್ಲಾ ಭಾಗಿದಾರರೊಡನೆ ವೆಬಿನಾರ್ ಮೂಲಕ ಸಮಾಲೋಚನಾ ಸಭೆಗಳನ್ನು ಆಯೋಜಿಸಲಾಗಿತ್ತು. ಸದರಿ ಸಭೆಗಳಲ್ಲಿ ಸಂಗ್ರಹಿಸಿದ ಅಭಿಪ್ರಾಯಗಳನ್ನು ಕ್ರೋಢೀಕರಿಸಿ ಅನುಷ್ಠಾನ ಚೌಕಟ್ಟಿನ ರೂಪುರೇಷೆಗಳನ್ನು ವಿನ್ಯಾಸಗೊಳಿಸುವ ಸಂದರ್ಭದಲ್ಲಿ ಅಳವಡಿಸಿಕೊಳ್ಳಲಾಗುವುದು.<br>• ರಾಷ್ಟ್ರೀಯ ಶಿಕ್ಷಣ ನೀತಿ 2020ರ ಸಂಬಂಧ ಶಿಕ್ಷಣ ಮಂತ್ರಾಲಯ, ಭಾರತ ಸರ್ಕಾರ, ಇವರು ನೀಡಿರುವ Task points ಗಳನ್ನು 2020 ರಿಂದ 2030 ರ ವರೆಗಿನ ಕಾಲಸೂಚಿಯಲ್ಲಿ ಅನುಷ್ಠಾನ ಮಾಡಲು ರಾಜ್ಯ ಸರ್ಕಾರ ಹಾಗೂ ಇಲಾಖೆಯು ಕ್ರಮ ಕೈಗೊಂಡಿದೆ. |
| **ಇ)** ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಎಷ್ಟು ಹಣವನ್ನು ಮೀಸಲಿಡಲಾಗಿದೆ ಹಾಗೂ ಯಾವ ಕಾಲಮಿತಿಯಲ್ಲಿ ಇದನ್ನು ಪೂರ್ಣಗೊಳಿಸಲಾಗುವುದು ? | ಕರ್ನಾಟಕ ಶಿಕ್ಷಣದ ಆಯೋಗದ ರಚನೆಗಾಗಿ ಈ ಬಾರಿಯ ಅಯವ್ಯಯದಲ್ಲಿ ಪ್ರತ್ಯೇಕವಾಗಿ ಒಂದು ಕೋಟಿ ರೂಪಾಯಿಗಳ ಅನುದಾನವನ್ನು ಕೋರಲಾಗಿದೆ. ಇದರೊಂದಿಗೆ ಶಿಕ್ಷಣ ಆಯೋಗ ರಚನೆಯಾದ ನಂತರ ಮುಂದಿನ ವೆಚ್ಚಗಳಿಗೆ ಜಿಲ್ಲಾವಾರು ಅಗತ್ಯತೆಗೆ ಅನುಗುಣವಾಗಿ ಅನುದಾನವನ್ನು ಕೋರಲಾಗುವುದು. |

**ಇಡಿ 3 ಪಿಜಿಸಿ 2021**

[ ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.

## ಕರ್ನಾಟಕ ವಿಧಾನ ಪರಿಷತ್ತು



| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 173 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ |
| ಉತ್ತರಿಸುವ ಸಚಿವರು | ಮಾನ್ಯ ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ) |
| ಉತ್ತರಿಸಬೇಕಾದ ದಿನಾಂಕ | ದಿನಾಂಕ: 01.02.2021 |

| | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಹೊಸ ಶಿಕ್ಷಣ ನೀತಿಯನ್ನು ಜಾರಿಗೆ ತರುವಲ್ಲಿ ಸರ್ಕಾರದ ನಿಲುವೇನು? | ಸರ್ಕಾರವು ಹೊಸ ಶಿಕ್ಷಣ ನೀತಿಯನ್ನು ಜಾರಿಗೆ ತರುವ ನಿಟ್ಟಿನಲ್ಲಿ ಸರ್ಕಾರವು ರಚಿಸಿದ ಕಾರ್ಯಪಡೆಯ ವರದಿಯನ್ವಯ ಅನುಷ್ಠಾನಗೊಳಿಸಲು ತಾತ್ವಿಕ ಒಪ್ಪಿರುತ್ತದೆ. |
| ಆ) | ರಾಜ್ಯದಲ್ಲಿ ಈ ಹೊಸ ಶಿಕ್ಷಣ ನೀತಿಯನ್ನು ಅನುಷ್ಠಾನಗೊಳಿಸಲು ತೆಗೆದುಕೊಳ್ಳಲಾಗಿರುವ ಕ್ರಮಗಳೇನು (ಸಂಪೂರ್ಣ ವಿವರ ಒದಗಿಸುವುದು). | ಅನುಷ್ಠಾನದ ರೂಪುರೇಷೆಯನ್ನು ಸಿದ್ಧಪಡಿಸಲು ಶ್ರೀ ಎಸ್.ವಿ. ರಂಗನಾಥ್, ಭಾ.ಆ.ಸೇ., ನಿವೃತ್ತ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಕಾರ್ಯಪಡೆಯನ್ನು ರಚಿಸಿದ್ದು, ಸಮಿತಿಯ ವರದಿ ಸರ್ಕಾರಕ್ಕೆ ಸಲ್ಲಿಸಲಾಗಿದೆ. ಈ ವರದಿಯನ್ವಯ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಕರ್ನಾಟಕದಲ್ಲಿ ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗುತ್ತಿದ್ದು, ಕಾರ್ಯಪಡೆಯು ನೀಡಿರುವ ವರದಿಯನ್ವಯ ಸಾಧಕ-ಬಾಧಕಗಳ ಬಗ್ಗೆ ವಿಮರ್ಶಿಸಿ ಜಾರಿಗೆ ತರುವ ನಿಟ್ಟಿನಲ್ಲಿ ಯೋಜನೆಯನ್ನು ರೂಪಿಸಿ Task Force ವರದಿಯ ಆಧಾರದ ಮೇಲೆ ವಿಸ್ತೃತ ಯೋಜನೆಯನ್ನು ಮಾಡಲಾಗುತ್ತಿದೆ. |
| ಇ) | ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಎಷ್ಟು ಹಣವನ್ನು ಮೀಸಲಿಡಲಾಗಿದೆ ಹಾಗೂ ಯಾವ ಕಾಲಮಿತಿಯಲ್ಲಿ ಇದನ್ನು ಪೂರ್ಣಗೊಳಿಸಲಾಗುವುದು? | ಪ್ರಸ್ತುತ ಈ ಹಂತದಲ್ಲಿ ಯಾವುದೇ ಹಣವನ್ನು ಮೀಸಲಿಟ್ಟಿರುವುದಿಲ್ಲ ಹಾಗೂ ಈ ಯೋಜನೆಯು ಪರಿಶೀಲನೆಯ ಹಂತದಲ್ಲಿರುತ್ತದೆ. |

ಸಂಖ್ಯೆ: ಇಡಿ 01 ಅಅವಿ 2021

(ಡಾ॥ ಅಶ್ವಥ್ ನಾರಾಯಣ ಸಿ.ಎನ್.)
ಉಪಮುಖ್ಯಮಂತ್ರಿಗಳು,
(ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಹಾಗೂ ಜೀವನೋಪಾಯ ಇಲಾಖೆ).